# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** **ದಿನಾಂಕ: 19.01.2020**

## ಪೂಜ್ಯ ಮಹಾಪೌರರು, ಮಾನ್ಯ ಆಯುಕ್ತರು ರವರ ನೇತೃತ್ವದಲ್ಲಿ ಪಲ್ಸ್ ಪೋಲಿಯೊ ಕಾರ್ಯಕ್ರಮಕ್ಕೆ ಚಾಲನೆ:



ಪೂಜ್ಯ ಮಹಾಪೌರರು, ಮಾನ್ಯ ಆಯುಕ್ತರು ರವರು ಇಂದು ಹಲಸರೂ ಹೆರಿಗೆ ಆಸ್ಪತ್ರೆ(ಹಲಸೂರು ಪೊಲೀಸ್ ಠಾಣೆ ಹತ್ತಿರ) ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಮಕ್ಕಳಿಗೆ ಲಸಿಕೆ ಹಾಕುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ವೇಳೆ ವಿಶೇಷ ಆಯುಕ್ತರು ಡಾ. ರವಿಕುಮಾರ್ ಸುರಪುರ, ವೈದ್ಯಾಧಿಕಾರಿಗಳಾದ ಡಾ. ಕಲಾವತಿ, ರೋಟರಿ ಕ್ಲಬ್ ಪದಾಧಿಕಾರಿಗಳು, ವೈದ್ಯರು, ಆಶಾಕಾರ್ಯಕರ್ತೆಯರು ಉಪಸ್ಥಿತರಿದ್ದರು.

ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮದ ಸದುಪಯೋಗವನ್ನು ಬಳಸಿಕೊಂಡು 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೆ ಲಸಿಕೆ ಹಾಕಿಸುವ ಮೂಲಕ ಪೋಲಿಯೊ ಮುಕ್ತ ನಗರವನ್ನಾಗಿ ಮಾಡಬೇಕು ಎಂದು ಮಹಾಪೌರರು ತಿಳಿಸಿದರು.

**ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮಹಾಪೌರರು,** ಈ ಕಾರ್ಯಕ್ರಮ ಯಶಸ್ವಿಯಾಗಬೇಕಾದರೆ ವೈದ್ಯರು, ಆಶಾ ಕಾರ್ಯಕರ್ತರು ಹಾಗೂ ಲಿಂಕ್ ವರ್ಕರ್ಸ್‌ನ ಶ್ರಮ ಹೆಚ್ಚಿದ್ದು, ಅವರಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಕಾರ್ಯಕ್ರಮ ನಡೆಯುವುದಕ್ಕೂ ಮುನ್ನ ಆಶಾ ಕಾರ್ಯಕರ್ತರು ಹಾಗೂ ಲಿಂಕ್ ವರ್ಕರ್ಸ್ ಮಕ್ಕಳಿಗೆ ಲಸಿಕೆ ಹಾಕಿಸುವ ಬಗ್ಗೆ ಪೋಷಕರಲ್ಲಿ ಅರಿವು ಮೂಡಿಸುವ ಕೆಲಸದಲ್ಲಿ ನಿರತರಾಗಿರುತ್ತಾರೆ. ವಾರ್ಡ್‌ಗಳಲ್ಲಿ ಮನೆ ಮನೆಗೆ ತೆರಳಿ ಕರಪತ್ರಗಳನ್ನು ಹಂಚುವ ಮೂಲಕ ಜಾಗೃತಿ ಮೂಡಿಸಿ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಲಸಕೆ ಹಾಕಿಸಿಕೊಳ್ಳುವ ಬಗ್ಗೆ ತಿಳುವಳಿಕೆ ಮೂಡಿಸುತ್ತಾರೆ ಎಂದರು.

ಲಸಿಕಾ ಕಾರ್ಯಕ್ರಮದಲ್ಲಿ 8,500ಕ್ಕೂ ಹೆಚ್ಚು ಕಾರ್ಯಕರ್ತರು ಭಾಗಿಯಾಗಿ, ಪಾಲಿಕೆ ಆರೋಗ್ಯ ಕೇಂದ್ರ, ಅಂಗನವಾಡಿ ಕೇಂದ್ರ, ಶಾಲೆಗಳು, ರೈಲ್ವೆ ಹಾಗೂ ನಿಲ್ದಾಣ, ಕೊಳಚೆ ಪ್ರದೇಶಗಳು ಹಾಗೂ ಬಸ್ ನಿಲ್ದಾಣಗಳಲ್ಲಿ ಲಸಿಕೆ ಹಾಕುವ ಕಾರ್ಯದಲ್ಲಿ ತೊಡಗಿಕೊಂಡಿದ್ದಾರೆ. ಪಾಲಿಕೆ ವತಿಯಿಂದ ಸ್ಥಿತ ಮತ್ತು ಸಂಚಾರಿ ತಂಡಗಳನ್ನು ನಿಯೋಜನೆ ಮಾಡಲಾಗಿದೆ ಎಂದು ತಿಳಿಸಿದರು.

**ಸುದ್ದಿಗಾರರೊಂದಿಗೆ ಪಾಲಿಕೆ ಆಯುಕ್ತರು ಮಾತನಾಡಿ,** ಈ ಬಾರಿಯ ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮದಲ್ಲಿ 5.71 ಲಕ್ಷ ಮಕ್ಕಳಿಗೆ ಲಸಿಕೆ ಹಾಕುವ ಗುರಿಯನ್ನು ಹಮ್ಮಿಕೊಳ್ಳಾಗಿದೆ. ಪಾಲಿಕೆ ವತಿಯಿಂದ 135 ವಾರ್ಡ್‌ಗಳಲ್ಲಿ ಲಸಿಕೆ ಹಾಕುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಉಳಿದ 63 ವಾರ್ಡ್‌ಗಳಲ್ಲಿ ಬೆಂಗಳೂರು ನಗರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಲಸಕೆ ಹಾಕಿವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಎಲ್ಲಾ ಪೋಷಕರು 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೆ ಲಸಿಕೆ ಹಾಕಿಸುವ ಮೂಲಕ ಎಲ್ಲರೂ ಅದರ ಸದುಪಯೋಗ ಪಡಿಸಿಕೊಳ್ಳುವಂತೆ ಮನವಿ ಮಾಡಿದರು.

ಪಾಲಿಕೆ 135 ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು 5,71,125 ಮಕ್ಕಳಲ್ಲಿ ಮೊದಲನೇ ದಿನ 4,71,593(ಶೇ.82.57) ಮಕ್ಕಳಿಗೆ ಲಸಿಕೆ ಹಾಕಲಾಗಿದೆ. ಮೆಟ್ರೊ ನಿಲ್ದಾಣ, ಮಾರುಕಟ್ಟೆಗಳು, ಮದುವೆ ಮಂಟಪಗಳಿಗೆ ಕಾರ್ಯಕರ್ತರು ಭೇಟಿ ನೀಡಿ ಲಸಿಕೆ ಹಾಕಿದ್ದಾರೆ. ಜೊತೆಗೆ ಲಾಲ್ ಬಾಗ್ ನಲ್ಲಿ ಫಲಪುಷ್ಪ ಪ್ರದರ್ಶನ ಇದ್ದ ಪರಿಣಾಮ 6 ತಂಡಗಳನ್ನು ನಿಯೋಜನೆ ಮಾಡಿ ಮಕ್ಕಳಿಗೆ ಲಸಿಕೆ ಹಾಕಲಾಗಿದೆ. ಇನ್ನೂ ಜನವರಿ 21 ರವರೆಗೆ ಲಸಿಕೆ ಕಾರ್ಯಕ್ರಮ ಮುಂದುವರಿಯಲಿದ್ದು, ಲಸಿಕೆ ಹಾಕಿಸಿಕೊಳ್ಳದ ಮಕ್ಕಳನ್ನು ಹುಡುಕಿ ಲಸಿಕೆ ಹಾಕಲಾಗವುದು ಎಂದು ಪಾಲಿಕೆ ಆರೋಗ್ಯಾಧಿಕಾರಿ ಡಾ. ಕಲಾವತಿ ತಿಳಿಸಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**